ಮೈಸೂರು ವಿಶ್ವವಿದ್ಯಾನಿಲಯ
UNIREG
2419440/2419361
2419063/2419301
8/11/21

ಇಮೇಲ್: registrar@uni-mysore.ac.in
ವೆಬ್ ಸೈಟ್: www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್‌ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406,
ಮೈಸೂರು-570 005.

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ವಿಶ್ವವಿದ್ಯಾನಿಲಯದ ಸಮ ಸಂಖ್ಯೆ ಆದೇಶ ದಿನಾಂಕ 03-08-2019
2. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಹಾಸನ ಇವರ ಪತ್ರ ಸಂಖ್ಯೆ: ಪಿ.ಜಿ.ಸಿ.ಹೆಚ್/297/2021-2022, ದಿನಾಂಕ 05-10-021.
3. ಮಾನ್ಯ ಕುಲಪತಿಗಳ ಆದೇಶ ದಿನಾಂಕ 17-11-2021

*****

**ಪರಿಷ್ಕೃತ ಆದೇಶ ಸಂಖ್ಯೆ: ಇಟಿ10/211/2018-19 ದಿನಾಂಕ 19ನೇ ನವೆಂಬರ್**

ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ಹಾಗು ಉಲ್ಲೇಖ(1)ರ ಆದೇಶದಂತೆ ಮುಂದುವರೆಕೆಯಾಗಿ ಕೆಳಕಂಡ ಅತಿಥಿ ಉಪನ್ಯಾಸಕರಿಗೆ ಈಗಾಗಲೇ ಹಂಚಿಕೆ ಮಾಡಲಾಗಿದ್ದ ಬೋದನ ಕಾರ್ಯಭಾರವನ್ನು ಈ ಕೆಳಗಿನಂತೆ ಅತಿಥಿ ಉಪನ್ಯಾಸಕರಾಗಿ ಆಹ್ವಾನಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ಉಲ್ಲೇಖ (1)ರ ಆದೇಶದಲ್ಲಿ ವಹಿಸಿದ್ದ ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯಬಾರ (ಗಂಟೆಗಳಲ್ಲಿ) * | ಉಲ್ಲೇಖ (1)ರ ಆದೇಶದಲ್ಲಿ ನಿಗದಿಪಡಿಸಿದ್ದ ಮಾಹೆಯಾನ ಸಂಭಾವನೆ | ಪ್ರಸ್ತುತ ನಿಗದಿ ಪಡಿಸಿರುವ ಪರಿಷ್ಕೃತ ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯಬಾರ (ಗಂಟೆಗಳಲ್ಲಿ) | ಪರಿಷ್ಕೃತ ಸಂಭಾವನೆ ರೂ.ಗಳಲ್ಲಿ |
|---|---|---|---|---|---|
| ಶ್ರೀ ಕೆ.ವಿ ಅಮರ ಬಿನ್ ವೆಂಕಟೇಶ್ ಕೆ.ಇ. ಕುಶವರ ಗ್ರಾಮ, ಬಿಕ್ಕೋಡು ಹೋಬಳಿ, ಬೇಲೂರು ತಾಲ್ಲೂಕು, ಹಾಸನ. | ಸಸ್ಯಶಾಸ್ತ್ರ | 08 | 15,000/- | 12 | 28000/- |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸ್ನಾತಕೋತ್ತರ ಕೇಂದ್ರದ ನಿರ್ದೇಶಕರು ಹಂಚಿಕೆ ಮಾಡುವರು. **ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.**

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ತಲುಪಿದ 7 ದಿನಗಳೊಳಗೆ ಸ್ನಾತಕೋತ್ತರ ಕೇಂದ್ರದ ನಿರ್ದೇಶಕರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

ಷರತ್ತುಗಳು:

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಸ್ನಾತಕೋತ್ತರ ಕೇಂದ್ರದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1 ದಿನಾಂಕ 02-07-2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

2/3/21

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಈ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ 2021-22ನೇ ಶೈಕ್ಷಣಿಕ ವರ್ಷದಲ್ಲಿ 12 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರುಗಳು ಬೇರೆ ಸರ್ಕಾರಿ ಕಾಲೇಜು ಅಥವಾ ಖಾಸಗಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಬಾರದು.

ಆಹ್ವಾನಿತ ಅತಿಥಿ ಉಪನ್ಯಾಸಕರು ಕೆಲಸಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು.

<u>ಮುಚ್ಚಳಿಕೆ</u>

1. ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ವಿಶ್ವವಿದ್ಯಾನಿಲಯವು 2021-22ನೇ ಶೈಕ್ಷಣಿಕ ವರ್ಷಕ್ಕೆ ಅಥವಾ ಮುಂದಿನ ಆದೇಶದವರೆಗೆ, ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಹೆಚ್ಚುವರಿ ಬೋಧನಾ ಕಾರ್ಯವನ್ನು ನಿರ್ವಹಿಸಲು ನನ್ನನ್ನು ಆಹ್ವಾನಿಸಿರುವುದು ತಾತ್ಕಾಲಿಕವಾಗಿರುತ್ತದೆ ಎಂದು ತಿಳಿದಿರುತ್ತೇನೆ. ಜೊತೆಗೆ ಕಾರಣಾಂತರಗಳಿಂದ ಹೆಚ್ಚುವರಿ ಭೋಧನಾ ಕಾರ್ಯದಲ್ಲಿ ಕೊರತೆಯುಂಟಾದಲ್ಲಿ ವಿಶ್ವವಿದ್ಯಾನಿಲಯವು ಯಾವುದೇ ಮುನ್ಸೂಚನೆ ಇಲ್ಲದಂತೆ ಹಾಗೂ ಯಾವುದೇ ಕಾರಣ ನೀಡದೆ ನನಗೆ ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಹಿಂಪಡೆಯಬಹುದಾಗಿದೆ.
2. ನಾನು ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರಲ್ಲಿ ಸೂಚಿಸಿರುವಂತೆ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅತಿಥಿ ಉಪನ್ಯಾಸಕನಾಗಿ ಕೆಲಸ ನಿರ್ವಹಿಸುತ್ತಿರುವಾಗ ಯಾವುದೇ ಸರ್ಕಾರಿ/ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕನಾಗಿ ಕರ್ತವ್ಯ ನಿರ್ವಹಿಸುವುದಿಲ್ಲ ಎಂದು ಈ ಮೂಲಕ ಪ್ರಮಾಣೀಕರಿಸುತ್ತೇನೆ ಹಾಗೂ ಹಾಗೇನಾದರೂ ಕೆಲಸ ನಿರ್ವಹಿಸುವುದು ಕಂಡು ಬಂದಲ್ಲಿ, ಈ ನೇಮಕಾತಿಯನ್ನು ಯಾವುದೇ ಸೂಚನೆ ನೀಡದೇ ರದ್ದುಪಡಿಸಲಾಗುವುದೆಂದು ತಿಳಿದಿರುತ್ತೇನೆ.

ಮೇಲಿನ ಎಲ್ಲಾ ಷರತ್ತುಗಳಿಗೆ ಬದ್ಧನಾಗಿ ತಾವು ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಒಪ್ಪಿಕೊಂಡಿರುತ್ತೇನೆ.

ಆದೇಶದ ಮೇರೆಗೆ
26/11/202
ಕುಲಸಚಿವ

ಇವರಿಗೆ:

1. ಸಂಬಂಧಪಟ್ಟ ಅತಿಥಿ ಉಪನ್ಯಾಸಕರಿಗೆ – ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಹೇಮಗಂಗೋತ್ರಿ, ಹಾಸನ ಇವರ ಮುಖಾಂತರ.
2. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಹೇಮಗಂಗೋತ್ರಿ, ಹಾಸನ – ಅತಿಥಿ ಉಪನ್ಯಾಸಕರಿಂದ ಮೇಲೆ ತಿಳಿಸಿರುವ ಮುಚ್ಚಳಿಕೆಯನ್ನು ಕಡ್ಡಾಯವಾಗಿ ಬರೆಸಿಕೊಳ್ಳುವುದು ಮತ್ತು ವಿದ್ಯಾರ್ಹತೆಗೆ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿ ದೃಢಪಡಿಸಿಕೊಂಡು ನಂತರ ಕೆಲಸಕ್ಕೆ ವರದಿ ಮಾಡಿಸಿಕೊಳ್ಳುವುದು.
3. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಹಣಕಾಸು ಅಧಿಕಾರಿಯವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಉಪಕುಲಸಚಿವರು (ಸಾಮಾನ್ಯ)/ಸಹಾಯಕ ಕುಲಸಚಿವ/ಅಧೀಕ್ಷಕರು (ಸಿಬ್ಬಂದಿ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿ ಇವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಕಛೇರಿ ಪ್ರತಿ.